सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳದ ಕಟ್ಟಡ (ಹಿಂಭಾಗ), ನಂ. 8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52.

**ನಂ.ರಾಚುಆ:257:ಇಯುಬಿ:2019 ದಿನಾಂಕ: 14.01.2020**

## ಪತ್ರಿಕಾ ಪ್ರಕಟಣೆ

ರಾಜ್ಯ ಚುನಾವಣಾ ಆಯೋಗವು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ನಗರಸಭೆ, ಚಿಕ್ಕಬಳ್ಳಾಪುರ ಜಿಲ್ಲೆಯ ಚಿಕ್ಕಬಳ್ಳಾಪುರ ನಗರಸಬೆ, ಮೈಸೂರು ಜಿಲ್ಲೆಯ ಹುಣಸೂರು ನಗರಸಭೆ ಒಳಗೊಂಡಂತೆ ಹಾಗೂ ನ್ಯಾಯಾಲಯದಲ್ಲಿ ಇತ್ಯರ್ಥವಾಗಿರುವ ನಗರ ಸ್ಥಳೀಯ ಸಂಸ್ಥೆಗಳು ಸೇರಿದಂತೆ ಒಟ್ಟು 6 (4 ನಗರಸಭೆಗಳು, 1 ಪುರಸಭೆ ಹಾಗೂ 1 ಪಟ್ಟಣ ಪಂಚಾಯಿತಿ) ನಗರ ಸ್ಥಳೀಯ ಸಂಸ್ಥೆಗಳಿಗೆ ಸಾರ್ವತ್ರಿಕ ಚುನಾವಣೆ ನಡೆಸಲು ಈ ಕೆಳಕಂಡಂತೆ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದೆ.

## ಚುನಾವಣಾ ವೇಳಾ ಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 21.01.2020 (ಮಂಗಳವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 28.01.2020 (ಮಂಗಳವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 29.01.2020 (ಬುಧವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 31.01.2020 (ಶುಕ್ರವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ) | **09.02.2020** (ಭಾನುವಾರ) |
| 6 | ಮರು ಮತದಾನ ಇದ್ದಲ್ಲಿ ಮತದಾನ ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ) | 10.02.2020 (ಸೋಮವಾರ) |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಗಂಟೆಯಿಂದ) (ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ) | 11.02.2020 (ಮಂಗಳವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 11.02.2020 (ಮಂಗಳವಾರ) |

* **ಸದಾಚಾರ ಸಂಹಿತೆಯು ಈ ತಕ್ಷಣದಿಂದ ಜಾರಿಗೆ ಬರುತ್ತದೆ. ಅಂದರೆ ದಿನಾಂಕ: 14.01.2020 ರಿಂದ ದಿನಾಂಕ: 11.02.2020 ರವರೆಗೆ ಆಯಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಜಾರಿಯಲ್ಲಿರುತ್ತದೆ.**

**ಅಂಕಿ-ಅಂಶಗಳು:** ಚುನಾವಣೆ ನಡೆಯುತ್ತಿರುವ ನಗರ ಸ್ಥಳೀಯ ಸಂಸ್ಥೆಗಳು, ವಾರ್ಡುಗಳ ಸಂಖ್ಯೆಗಳ ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ.

**ಅಭ್ಯರ್ಥಿಗಳ ಚುನಾವಣಾ ವೆಚ್ಚಮಿತಿ:** ಅಭ್ಯರ್ಥಿಗಳ ಚುನಾವಣಾ ವೆಚ್ಚದ ಗರಿಷ್ಠ ಮಿತಿಯು ಈ ಕೆಳಕಂಡತಿರುತ್ತದೆ.

| ಕ್ರ. ಸಂ. | ನಗರ ಸ್ಥಳೀಯ ಸಂಸ್ಥೆಗಳು | ವೆಚ್ಚಮಿತಿ (ರೂ. ಲಕ್ಷಗಳಲ್ಲಿ) |
|---|---|---|
| 1 | ಮಹಾನಗರಪಾಲಿಕೆ (ಬಿ.ಬಿ.ಎಂ.ಪಿ.ಹೊರತುಪಡಿಸಿ) | 3.00 |
| 2 | ನಗರಸಭೆ | 2.00 |
| 3 | ಪುರಸಭೆ | 1.50 |
| 4 | ಪಟ್ಟಣ ಪಂಚಾಯಿತಿ | 1.00 |

- **NOTA:** ರಾಜ್ಯ ಚುನಾವಣಾ ಆಯೋಗವು ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತದಾರರ ಪಟ್ಟಿಯಲ್ಲಿ ತನ್ನ ಹೆಸರು ಇರುವ ವ್ಯಕ್ತಿಯು, ತನ್ನ ಇಚ್ಛೆಯಂತೆ, "ಯಾರೊಬ್ಬರಿಗೂ ತನ್ನ ಮತ ನೀಡಲು ಇಚ್ಛೆ ಇರುವುದಿಲ್ಲ" ಎಂಬ ತನ್ನ ತೀರ್ಮಾನವನ್ನು ರಹಸ್ಯವಾಗಿ ಮತ ಚಲಾಯಿಸುವ ಮೂಲಕ ವ್ಯಕ್ತಪಡಿಸಲು ಅನುಕೂಲವಾಗುವಂತೆ ಮತಪತ್ರದಲ್ಲಿ ಕೊನೆಯ ಅಭ್ಯರ್ಥಿಯ ನಂತರದ ಪ್ಯಾನಲ್‌ನಲ್ಲಿ "NOTA" / "ಮೇಲ್ಕಂಡ ಯಾರೂ ಅಲ್ಲ" ಎಂದು ಮುದ್ರಿಸಲಾಗಿರುತ್ತದೆ.
- **ಭಾವಚಿತ್ರವಿರುವ ಮತಪತ್ರ:** ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಒಂದೇ ವಾರ್ಡಿನಲ್ಲಿ ಒಂದೇ ಹೆಸರಿನ ಅಭ್ಯರ್ಥಿಗಳು ಸ್ಪರ್ಧಿಸುವ ಸಂದರ್ಭಗಳಿರುವುದರಿಂದ, ಅಭ್ಯರ್ಥಿಗಳನ್ನು ಗುರುತಿಸಲು ಮತಪತ್ರದಲ್ಲಿ ಅವರ ಹೆಸರಿನ ಮುಂದೆ ಅವರ ವೃತ್ತಿ ಅಥವಾ ವಿಳಾಸ ಇತ್ಯಾದಿಗಳನ್ನು ತೋರಿಸಲಾಗುತ್ತಿತ್ತು ಆದರೂ ಸಹ ಮತದಾರನಿಗೆ ಗೊಂದಲ ಉಂಟಾಗುವುದನ್ನು ತಪ್ಪಿಸಲು ಮತಪತ್ರದಲ್ಲಿ ಎಲ್ಲಾ ಅಭ್ಯರ್ಥಿಗಳ ಹೆಸರಿನ ಮುಂದೆ ಅವರ ಇತ್ತೀಚಿನ ಭಾವಚಿತ್ರ ಮುದ್ರಿಸುವಂತೆ ಕ್ರಮ ಕೈಗೊಳ್ಳಲಾಗಿದೆ.
- **ಘೋಷಣಾ ಪತ್ರ / ಪ್ರಮಾಣಪತ್ರ:** ಮತದಾರನಿಗೆ ಅಭ್ಯರ್ಥಿಯ ಪೂರ್ವಾಪರಗಳನ್ನು ತಿಳಿದುಕೊಳ್ಳಲು ಸ್ಪರ್ಧಿಸುವ ಪ್ರತಿಯೊಬ್ಬ ಅಭ್ಯರ್ಥಿಯು ನಾಮಪತ್ರದೊಂದಿಗೆ, ತನ್ನ ಹಿನ್ನೆಲೆ, ಚರಾಸ್ತಿ ಮತ್ತು ಸ್ಥಿರಾಸ್ತಿಗಳ ವಿವರಗಳು, ತನ್ನ ಸ್ವವಿವರ, ವಿದ್ಯಾರ್ಹತೆ ಆದಾಯದ ಮೂಲಗಳನ್ನು ಪರಿಷ್ಕೃತ ನಮೂನೆಯಲ್ಲಿ ಘೋಷಣಾ ಪತ್ರ / ಪ್ರಮಾಣ ಪತ್ರ (Affidavit) ಸಲ್ಲಿಸಬೇಕಾಗಿರುತ್ತದೆ.
- **ಕಾನೂನು ಮತ್ತು ಸುವ್ಯವಸ್ಥೆ:** ನಗರ ಸ್ಥಳೀಯ ಸಂಸ್ಥೆಗಳ ಸಾರ್ವತ್ರಿಕ ಚುನಾವಣೆಯ ಬಂದೋಬಸ್ತ್ ಹಾಗೂ ಕಾನೂನು ಸುವ್ಯವಸ್ಥೆಯನ್ನು ನೋಡಿಕೊಳ್ಳಲು ರಾಜ್ಯ ಪೊಲೀಸ್ ಇಲಾಖೆಯ ಸಹಕಾರವನ್ನು ಪಡೆದುಕೊಳ್ಳಲಾಗುತ್ತಿದೆ.
- **ಚುನಾವಣಾ ವೀಕ್ಷಕರ ನೇಮಕಾತಿ:** ಚುನಾವಣೆ ನಡೆಯಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ **ಸಾಮಾನ್ಯ ವೀಕ್ಷಕರನ್ನು** ಹಾಗೂ **ಚುನಾವಣಾ ವೆಚ್ಚ ವೀಕ್ಷಕರನ್ನು ಆಯೋಗದಿಂದ** ನೇಮಕ ಮಾಡಲಾಗುತ್ತಿದೆ.
- **ಚುನಾವಣಾ ಅಧಿಸೂಚನೆ:** ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಿಗೆ ಸಂಬಂಧಿಸಿದಂತೆ ಚುನಾವಣಾ ಅಧಿಸೂಚನೆಯನ್ನು ಹೊರಡಿಸುವರು.
- **ನಗರ ಸ್ಥಳೀಯ ಸಂಸ್ಥೆಗಳ ಉಪ ಚುನಾವಣೆ:** ಈ ಕೆಳಕಂಡ ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ ವಾರ್ಡ್‌ಗಳಿಗೆ ಮೇಲ್ಕಂಡ ವೇಳಾಪಟ್ಟಿಯಂತೆ ಉಪ ಚುನಾವಣೆ ನಡೆಸಲಾಗುತ್ತಿದೆ.

| ಕ್ರ. ಸಂ. | ಜಿಲ್ಲೆ | ನಗರ ಸ್ಥಳೀಯ ಸಂಸ್ಥೆ | ವಾರ್ಡ್ ಸಂಖ್ಯೆ | ತೆರವಾಗಲು ಕಾರಣ |
|---|---|---|---|---|
| 1 | ಮೈಸೂರು | ಮೈಸೂರು ಮಹಾನಗರಪಾಲಿಕೆ | 18 | ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ |
| 2. | ಬೆಳಗಾವಿ | ಖಾನಾಪುರ ಪಟ್ಟಣ ಪಂಚಾಯತ್ | 05 | ಸದಸ್ಯರ ನಿಧನದಿಂದ |
| 3. | ಹಾವೇರಿ | ಹಿರೇಕೆರೂರ ಪಟ್ಟಣ ಪಂಚಾಯತ್ | 12 | ಸದಸ್ಯರ ನಿಧನದಿಂದ |

ರಾಜ್ಯ ಚುನಾವಣಾ ಆಯೋಗವು ನಗರ ಸ್ಥಳೀಯ ಸಂಸ್ಥೆಗಳ ಸಾರ್ವತ್ರಿಕ ಚುನಾವಣೆ ಹಾಗೂ ಉಪಚುನಾವಣೆಯನ್ನು ಶಾಂತಿ ಮತ್ತು ಸುವ್ಯವಸ್ಥೆಯಿಂದ ನಡೆಸಲು ಎಲ್ಲಾ ರಾಜಕೀಯ ಪಕ್ಷಗಳು, ಅಭ್ಯರ್ಥಿಗಳು ಹಾಗೂ ಸಾರ್ವಜನಿಕರು ಸಹಕಾರ ನೀಡುವಂತೆ ಕೋರಲಾಗಿದೆ.

ಈ ಬಗ್ಗೆ ಶ್ರವಣ ಮತ್ತು ದೃಶ್ಯ ಮಾಧ್ಯಮದಲ್ಲಿ ವ್ಯಾಪಕ ಪ್ರಚಾರ ನೀಡಿ ಸಹಕರಿಸುವಂತೆ ಕೋರಲಾಗಿದೆ.

(ನಾಗರಾಜು. ಎನ್.ಆರ್)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.
14/01/2020

ಇವರಿಗೆ:

1. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ವ್ಯವಸ್ಥಾಪಕರು/ಸಂಪಾದಕರು, ಪತ್ರಿಕೆ/ ದೂರ ದರ್ಶನ.

ಅನುಬಂಧ

**ನಗರ ಸ್ಥಳೀಯ ಸಂಸ್ಥಗಳ ಸಾರ್ವತ್ರಿಕ ಚುನಾವಣೆ, 2020**

**ಸಂಖ್ಯೆ: ರಾಚುಆ/257/ಇಯುಬಿ/2019, ದಿನಾಂಕ: 14.01.2020**

| ಕ್ರ. ಸಂ. | ಜಿಲ್ಲೆ | ಕ್ರ. ಸಂ. | ನಗರ ಸ್ಥಳೀಯ ಸಂಸ್ಥೆಯ ಹೆಸರು | | ಒಟ್ಟು ವಾರ್ಡುಗಳ ಸಂಖ್ಯೆ |
|---|---|---|---|---|---|
| 1 | ಬೆಂಗಳೂರು ಗ್ರಾಮಾಂತರ | 1 | ಹೊಸಕೋಟೆ | ನಗರಸಭೆ | 31 |
| 2 | ಚಿಕ್ಕಬಳ್ಳಾಪುರ | 2 | ಚಿಕ್ಕಬಳ್ಳಾಪುರ | ನಗರಸಭೆ | 31 |
| 3 | ಮೈಸೂರು | 3 | ಹುಣಸೂರು | ನಗರಸಭೆ | 31 |
| 4 | ಬಳ್ಳಾರಿ | 4 | ಸಿರಗುಪ್ಪ | ನಗರಸಭೆ | 31 |
| | | 5 | ತೆಕ್ಕಲಕೋಟೆ | ಪಟ್ಟಣ ಪಂಚಾಯತಿ | 20 |
| 5 | ವಿಜಯಪುರ | 6 | ಸಿಂಧಗಿ | ಪುರಸಭೆ | 23 |

**1.** ಸಾರ್ವತ್ರಿಕ ಚುನಾವಣೆ ನಡೆಯುತ್ತಿರುವ ನಗರ ಸ್ಥಳೀಯ ಸಂಸ್ಥೆಗಳ ವಿವರ:

| ಕ್ರ.ಸಂ. | ನಗರ ಸ್ಥಳೀಯ ಸಂಸ್ಥೆಗಳು | ಒಟ್ಟು ಸಂಖ್ಯೆ | ಒಟ್ಟು ವಾರ್ಡುಗಳ ಸಂಖ್ಯೆ |
|---|---|---|---|
| 1 | ನಗರಸಭೆಗಳು | 4 | 124 |
| 2 | ಪುರಸಭೆಗಳು | 1 | 23 |
| 3 | ಪಟ್ಟಣ ಪಂಚಾಯಿತಿಗಳು | 1 | 20 |
| | ಒಟ್ಟು | **6** | **167** |

(ನಾಗರಾಜು. ಎನ್.ಆರ್)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೆ
14/01/2020